ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ  ದಿನಾಂಕ : DATE : 28/1/21

## ಜೆಡಿಎಸ್ ಅಭ್ಯರ್ಥಿಯನ್ನು ಬೆಂಬಲಿಸಲು ಬಿಜೆಪಿ ನಿರ್ಧಾರ । ಇಂದು ಪ್ರಾಣೇಶ್ ನಾಮಪತ್ರ ಸಲ್ಲಿಕೆ

# ಬಸವರಾಜ ಹೊರಟ್ಟಿ ಸಭಾಪತಿ ಪ್ರಾಣೇಶ್ ಉಪಸಭಾಪತಿ?

28/1/21

**ವಿಶ್ವವಾಣಿ ವಿಶೇಷ** ಬೆಂಗಳೂರು

ಜೆಡಿಎಸ್‌ನ ಹಿರಿಯ ಸದಸ್ಯರಾಗಿರುವ ಬಸವರಾಜ ಹೊರಟ್ಟಿ ಅವರು ವಿಧಾನ ಪರಿಷತ್ ಸಭಾಪತಿ ಮತ್ತು ಬಿಜೆಪಿಯ ಎಂ.ಕೆ. ಪ್ರಾಣೇಶ್ ಅವರು ಉಪಸಭಾಪತಿಯಾಗುವುದು ಬಹುತೇಕ ಖಚಿತವಾಗಿದೆ. ಪ್ರಾಣೇಶ್ ಗುರುವಾರ ನಾಮಪತ್ರ ಸಲ್ಲಿಸಲಿದ್ದಾರೆ.

ಪರಿಷತ್ ಸಭಾಪತಿ ಸ್ಥಾನಕ್ಕೆ ಬಿಜೆಪಿ-ಜೆಡಿಎಸ್ ನಡುವಿನ ಪೈಪೋಟಿಯಲ್ಲಿ ಕೊನೆಗೂ ಜೆಡಿಎಸ್ ಮುನ್ನಡೆ ಸಾಧಿಸಿದ್ದು, ಜೆಡಿಎಸ್‌ಗೆ ಸಭಾಪತಿ ಸ್ಥಾನ ಬಿಟ್ಟುಕೊಡಲು ಬಿಜೆಪಿ ನಾಯಕರು ಸಮ್ಮತಿಸಿದ್ದಾರೆ.

ಗುರುವಾರದಿಂದ ಆರಂಭಗೊಳ್ಳಲಿರುವ ಜಂಟಿ ಅಧಿವೇಶನದ ಬಳಿಕ ಉಪಸಭಾಪತಿ ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಬಿಜೆಪಿ-ಜೆಡಿಎಸ್ ಒಂದಾದರೆ ಮಾತ್ರ ಈ ಸ್ಥಾನಕ್ಕೆ ಕಾಂಗ್ರೆಸ್‌ನವರನ್ನು ದೂರವಿರಿಸಬಹುದು. ಆದರೆ ಜೆಡಿಎಸ್ ನಾಯಕರು ಬಿಜೆಪಿಯನ್ನು ಬೆಂಬಲಿಸುವುದಕ್ಕೆ ಸಭಾಪತಿ ಸ್ಥಾನದ ಆಫರ್ ನೀಡಿದ್ದರು. ಜೆಡಿಎಸ್‌ನ ಈ ಆಫರ್‌ಗೆ ರಾಜ್ಯ ಬಿಜೆಪಿ ನಾಯಕರು ಸಮ್ಮತಿಸಿರಲಿಲ್ಲ. ವಿಧಾನ ಪರಿಷತ್‌ನಲ್ಲಿ ಬಿಜೆಪಿ ಅತಿದೊಡ್ಡ ಪಕ್ಷ ಆದ್ದರಿಂದ ಬಿಜೆಪಿಗೆ ಸಭಾಪತಿ ಸ್ಥಾನ ಸಿಗಬೇಕು ಎನ್ನುವ ವಾದವನ್ನು ಮಂಡಿಸಿದ್ದರು. ಆದರೆ ಸಭಾಪತಿ ಸ್ಥಾನ ನೀಡದಿದ್ದರೆ, ಪ್ರತಾಪ್‌ಚಂದ್ರ ಶೆಟ್ಟಿ ಅವರ ವಿರುದ್ಧ ಅವಿಶ್ವಾಸ ನಿರ್ಣಯಕ್ಕೆ ಬೆಂಬಲಿಸುವುದಿಲ್ಲ ಎನ್ನುವ ಪರೋಕ್ಷ ಸಂದೇಶವನ್ನು ರವಾನಿಸಿದ್ದಕ್ಕೆ, ಬಿಜೆಪಿ ವರಿಷ್ಠರು ಸಭಾಪತಿ ಸ್ಥಾನ ಬಿಟ್ಟುಕೊಡಲು ಒಪ್ಪಿದ್ದಾರೆ ಎಂದು ತಿಳಿದುಬಂದಿದೆ.

**ಹೈಕಮಾಂಡ್‌ನಿಂದ ಸಂದೇಶ:** ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡುವಂತೆ ಯಡಿಯೂರಪ್ಪ ಅವರಿಗೆ, ಕೇಂದ್ರದ ನಾಯಕರಿಂದ ಸಂದೇಶ ಬಂದಿರುವುದರಿಂದ ಉಪಸಭಾಪತಿ ಸ್ಥಾನಕ್ಕೆ ಬಿಜೆಪಿ ಅಭ್ಯರ್ಥಿ ಸ್ಪರ್ಧಿಸುವುದು ಖಚಿತವಾಗಿದೆ.





### ಅಂತಿಮ ಕ್ಷಣದಲ್ಲಿ ಮಣಿದ ಬಿಜೆಪಿ

**ಆರಂಭದಲ್ಲಿ ಬಿಜೆಪಿ ನಾಯಕರು ಸಭಾಪತಿ ಸ್ಥಾನವನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ಒಪ್ಪಿರಲಿಲ್ಲ. ಆದರೆ ಜೆಡಿಎಸ್ ನಾಯಕರು, ಸಭಾಪತಿ ಸ್ಥಾನವನ್ನು ಬಿಟ್ಟುಕೊಡದಿದ್ದರೆ ಸರಕಾರಕ್ಕೆ ಪರಿಷತ್‌ನಲ್ಲಿ ಬೆಂಬಲಿಸುವುದಿಲ್ಲ ಎನ್ನುವ ಸ್ಪಷ್ಟ ಸಂದೇಶವನ್ನು ರವಾನಿಸಿದ್ದಾರೆ. ಒಂದು ವೇಳೆ ಈ ರೀತಿ ಮಾಡಿದರೆ, ಪ್ರತಾಪ್‌ಚಂದ್ರ ಶೆಟ್ಟಿ ಅವರ ವಿರುದ್ಧ ಬಿಜೆಪಿ ಮಂಡಿಸಲಿರುವ ಅವಿಶ್ವಾಸ ನಿರ್ಣಯದಲ್ಲಿ ಬಿಜೆಪಿಗೆ ಸೋಲಾಗುವ ಸಾಧ್ಯತೆಯಿದೆ. ಆದ್ದರಿಂದ ಅಂತಿಮ ಕ್ಷಣದಲ್ಲಿ ಜೆಡಿಎಸ್ ಒತ್ತಡಕ್ಕೆ ಬಿಜೆಪಿ ಮಣಿದಿದೆ ಎಂದು ತಿಳಿದುಬಂದಿದೆ.**